# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.70 :ರಾಜಗೋಪಾಲನಗರ

**ದಿನಾಂಕ: 06.05.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀಮತಿ ಕಮಲ ಹೆಚ್ ನೋಡಲ್ ಅಧಿಕಾರಿ, ವಾರ್ಡ್ 70ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀಮತಿ ಕಮಲ ಹೆಚ್ | ನೋಡಲ್‌ಅಧಿಕಾರಿ–ವಾರ್ಡ್ ನಂ.70 |
| 2 | ಶ್ರೀ ಹೇಮಂತ್‌ಕುಮಾರ್‌ಎಸ್ ಕೆ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 70 |
| 3 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 |
| 4 | ತ್ರಿವೇಣಿ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 |
| 5 | ಚಂದ್ರ | ಮಾರ್ಷಲ್ |
| 6 | ಚಿಕ್ಕಣ್ಣ ಮೂರ್ತಿ | ಅರಣ್ಯ ಇಲಾಖಾ ಸಿಬ್ಬಂದಿ |
| 7 | ನಾಗೇಶ್ ವಿ | ರಾಜಗೋಪಾಲನಗರ ಆರಕ್ಷಕ ಸಿಬ್ಬಂದಿ |
| 8 | ಬಿ ಶಿವಶಂಕರ್ | ಸಾರ್ವಜನಿಕರು |
| 9 | ವಿ ನಾಗೇಶ್ | ಸಾರ್ವಜನಿಕರು |

## :ನಡಾವಳಿಯ ವರದಿ:

ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಹೇಮಂತ್‌ಕುಮಾರ್‌ಎಸ್ ಕೆ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತಕೋರಿದರು.

- ಶ್ರೀಮತಿ ಕಮಲ ಹೆಚ್, ನೋಡಲ್ ಅಧಿಕಾರಿರವರು ಮಾತನಾಡಿ ಕೋವಿಡ್–19 ಸೋಂಕು ವ್ಯಾಪಕವಾಗಿ ಹರಡುತ್ತಿದ್ದು, ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಿಕರಲ್ಲಿ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಹಾಗೂ ಮಾಸ್ಕ್ ಧರಿಸುವ ಬಗ್ಗೆ ಅರಿವು ಮೂಡಿಸುವಂತೆ, ಲಸಿಕೆ ಹಾಕಿಸಿಕೊಳ್ಳಲು

ಜಾಗೃತಿ ಮೂಡಿಸುವಂತೆ ತಿಳಿಸಿದರು ಹಾಗೂ ಹೋಮ್ ಐಸೋಲೇಷನ್ ಆದವರಿಗೆ ಔಷಧಿ ಕೊಡಿಸಲು ಸೂಕ್ತ ಕ್ರಮವಹಿಸಲು ತಿಳಿಸಿದರು.

- ಕೆ.ಶಿವಲಿಂಗಯ್ಯ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70ರವರು ಮಾತನಾಡಿ ವಾರ್ಡ್ 70ರ ವ್ಯಾಪ್ತಿಯಲ್ಲಿ ಇದುವರೆಗೂ ಒಟ್ಟು 1435 ಸಕ್ರಿಯ ಪ್ರಕರಣಗಳು ಕಂಡು ಬಂದಿದ್ದು, ಅವುಗಳಲ್ಲಿ 1328 ಮಂದಿ ಮನೆಯಲ್ಲೆ ಕ್ವಾರಂಟೈನ್ ಆಗಿದ್ದು, ಇನ್ನುಳಿದ 235 ಮಂದಿ ಆಸ್ಪತ್ರೆಯಲ್ಲಿರುವುದಾಗಿ ತಿಳಿಸಿದರು ಹಾಗೂ ಸ್ವಚ್ಛತೆ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಬಗ್ಗೆ ಅರಿವು ಮೂಡಿಸಲಾಗಿದೆ ಎಂದು ತಿಳಿಸಿದರು.

- <u>ಸ್ವಚ್ಛತೆ ಮತ್ತು ಘನ ತ್ಯಾಜ್ಯ ನಿರ್ವಹಣೆ ಬಗ್ಗೆ:</u>
  - ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70ರವರು ಮಾತಾನಾಡಿ ವಾರ್ಡ್ 70ರ ವ್ಯಾಪ್ತಿಯಲ್ಲಿ ದಿನಾಂಕ:15/04/2021 ರಿಂದ 30/04/2021 ರವರೆಗೆ 38 ಮಂದಿ ಮಾಸ್ಕ್ ಧರಿಸದವರಿಂದ ರೂ.6700/-ಗಳ ದಂಡವನ್ನು ಸಂಗ್ರಹಿಸಲಾಗಿದೆ, ಕಸವನ್ನು ಎಲ್ಲೆಂದರಲ್ಲಿ ಸುರಿಯುವವರಿಂದ ರೂ5250/-ಗಳ ದಂಡವನ್ನು ಸಂಗ್ರಹಿಸಲಾಗಿದೆ ಹಾಗೂ ಮಾಸ್ಕ್ ಧರಿಸಲು ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗಿದೆ ಎಂದು ತಿಳಿಸಿದರು.

- <u>ಇನ್ನಿತರ ಸಮಸ್ಯೆಗಳ ಬಗ್ಗೆ</u>
  - ಶ್ರೀಮತಿ ಕಮಲ ಹೆಚ್, ನೋಡಲ್ ಅಧಿಕಾರಿರವರು ಮಾತನಾಡಿ ಜೂನ್ 5 ಪರಿಸರ ದಿನಾಚರಣೆಯ ಅಂಗವಾಗಿ 1000 ಗಿಡಗಳನ್ನು ನೆಡಲು ಉದ್ದೇಶಿಸಿರುವ ಬಗ್ಗೆ ಪ್ರಸ್ತಾಪಿಸಿದರು.
    - ಇದಕ್ಕೆ ಅರಣ್ಯ ಇಲಾಖಾ ಸಿಬ್ಬಂದಿಯಾದ ಚಿಕ್ಕಣ್ಣ ಮೂರ್ತಿರವರು ಮಾತನಾಡಿ ದಾಸರಹಳ್ಳಿ ವ್ಯಾಪ್ತಿಯಲ್ಲಿ 8000 ಗಿಡಗಳನ್ನು ನಡೆಲು ಟೆಂಡರ್ ಕರೆಯುವ ಕಾರ್ಯವು ಪ್ರಗತಿಯಲ್ಲಿದ್ದು, ಟೆಂಡರ್ ಕರೆದು ಕಾರ್ಯದೇಶ ಪಡೆದ ನಂತರ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಅಗತ್ಯ ಕ್ರಮ ವಹಿಸುವುದಾಗೀ ತಿಳಿಸಿದರು.

<u>BBMP SAHAYA APP:</u>

- ಹೇಮಂತ್‌ಕುಮಾರ್‌ಎಸ್.ಕೆ ಸಹಾಯಕ ಅಭಿಯಂತರರು, ವಾರ್ಡ್ ನಂ.70 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.
- ತ್ರಿವೇಣಿ, ಕಿರಿಯ ಆರೋಗ್ಯ ಪರಿವೀಕ್ಷಕರು, ಮಾತನಾಡಿ ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟ ದೂರುಗಳನ್ನು ಪರಿಹರಿಸಲಾಗಿದೆ ಹಾಗೂ ಯಾವುದೇ ಸಮಸ್ಯೆ ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

- ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಹೇಮಂತ್‌ಕುಮಾರ್ ಎಸ್ ಕೆ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ–ವಾರ್ಡ್ 70 ಹಾಗೂ
ಸಹಾಯಕ ಅಭಿಯಂತರರು,

Hkamala.
(ಕಮಲ ಹೆಚ್)
ನೋಡಲ್ ಅಧಿಕಾರಿ ವಾರ್ಡ್–70

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರರವರ ಆದ್ಯ ಗಮನಕ್ಕೆ ತರಲಾಗಿದೆ.
2) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
8) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
9) ಕಛೇರಿ ಕಡತಕ್ಕೆ